ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವಿಶೇಷ ಭತ್ಯೆಯನ್ನು ವೇತನದಲ್ಲಿ ವಿಲೀನಗೊಳಿಸುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

1427 (1689) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ: 01-08-2008ರ ನಂತರ ನೇಮಕಗೊಂಡಿರುವ ಪ್ರೌಢಶಾಲಾ ಸಹ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವಿಶೇಷ ಭತ್ಯೆಯನ್ನು ಮೂಲ ವೇತನದಲ್ಲಿ ವಿಲೀನಗೊಳಿಸಲಾಗಿದೆಯೇ ;

(ಆ) ಈ ವಿಷಯವಾಗಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದನ್ನು ಜಾರಿ ಮಾಡಲು ವಿಳಂಬ ನೀತಿ ಅನುಸರಿಸಲು ಕಾರಣವೇನು ;

(ಈ) ಪದವಿ ಪೂರ್ವ ಕಾಲೇಜುಗಳಲ್ಲಿ ಪಿ.ಹೆಚ್.ಡಿ., ಎಸ್.ಎಲ್.ಇ.ಟಿ., ಎನ್.ಇ.ಟಿ., ಪದವಿ ಹೊಂದಿರುವ ಉಪನ್ಯಾಸಕರಿಗೆ ಸರ್ಕಾರ ನೇಮಿಸಿದ ಕುಮಾರ್ ನಾಯ್ಕ್ ಸಮಿತಿ ಶಿಫಾರಸ್ಸಿನ ಪ್ರಕಾರ ಪದವಿ ಕಾಲೇಜಿಗೆ ಬಡ್ತಿ ನೀಡಲಾಗಿದೆಯೇ ; ಇದಕ್ಕಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು